ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಎಸ್. ರವಿ ಇವರು ನಿಯಮ 72 ರಡಿ ನೀಡಿರುವ ಗಮನ ಸೆಳೆಯುವ ಸೂಚನೆಗೆ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರ ಉತ್ತರ

--o--

## ವಿಷಯ

ಬೆಂಗಳೂರು ಗ್ರಾಮಾಂತರ ಜಿಲ್ಲಾ ವ್ಯಾಪ್ತಿಯಲ್ಲಿ ಕೆ.ಐ.ಎ.ಡಿ.ಬಿ. ಯವರು ಕೃಷಿ ಜಮೀನುಗಳನ್ನು ಬಲವಂತವಾಗಿ ಭೂಸ್ವಾಧೀನ ಮಾಡಿಕೊಳ್ಳುತ್ತಿರುವವರ ವಿರುದ್ಧ ರೈತರು ನಡೆಸುತ್ತಿರುವ ಪ್ರತಿಭಟನೆಗಳ ಬಗ್ಗೆ ಮತ್ತು ಸರ್ಕಾರವು ಕೈಗಾರಿಕೆಗಳಿಗಾಗಿ ಭೂಸ್ವಾಧೀನ ಮಾಡಿಕೊಳ್ಳುವ ಮುನ್ನ ಆ ಭಾಗದ ರೈತರನ್ನು ಗಮನಕ್ಕೆ ತೆಗೆದುಕೊಂಡು ಅವರ ಅಭಿಪ್ರಾಯಗಳಿಗೆ ಮನ್ನಣೆ ನೀಡಿ ಮುಂದಿನ ನಿರ್ಧಾರಗಳನ್ನು ಕೈಗೊಳ್ಳುವ ಕುರಿತು ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರ ಗಮನ ಸೆಳೆಯ ಬಯಸುತ್ತೇನೆ.

## ಉತ್ತರ

ಕೆ.ಐ.ಎ.ಡಿ.ಬಿ. ವತಿಯಿಂದ ಕೈಗಾರಿಕಾ ಪ್ರದೇಶಕ್ಕಾಗಿ ಜಮೀನನ್ನು ಭೂಸ್ವಾಧೀನಪಡಿಸುವ ಮುನ್ನ ಸದರಿ ಪ್ರದೇಶದಲ್ಲಿ ಕೈಗಾರಿಕೋದ್ಯಮಿಗಳಿಂದ ಕೈಗಾರಿಕಾ ನಿವೇಶನಗಳಿಗೆ ಬೇಡಿಕೆ ಇರುವ ಬಗ್ಗೆ ಕೆ.ಐ.ಎ.ಡಿ.ಬಿ.ಯ ಸಂಬಂಧಪಟ್ಟ ವಿಶೇಷ ಭೂಸ್ವಾಧೀನಾಧಿಕಾರಿ ಮತ್ತು ಕಾರ್ಯಪಾಲಕ ಅಭಿಯಂತರರು ಹಾಗೂ ಆಯಾ ಜಿಲ್ಲೆಗಳ ಜಿಲ್ಲಾ ಕೈಗಾರಿಕಾ ಕೇಂದ್ರಗಳ ಜಂಟಿ ನಿರ್ದೇಶಕರ ಸಹಯೋಗದೊಂದಿಗೆ ಜಮೀನುಗಳನ್ನು ಗುರುತಿಸಿ, ಶಿಫಾರಸ್ಸು ಮಾಡುವ ವರದಿಯನ್ನು ಮಂಡಳಿ ಸಭೆಯ ಮುಂದೆ ಮಂಡಿಸಿ, ಅದರ ಅನುಮೋದನೆ ಪಡೆದು ಸರ್ಕಾರದ ದಿನಾಂಕ: 18.03.2013ರ ಸುತ್ತೋಲೆಯಲ್ಲಿನ ನಿರ್ದೇಶನಗಳ ಅನುಸಾರ ಕೆ.ಐ.ಎ.ಡಿ. ಕಾಯ್ದೆ 1966ರ ಕಲಂ 3(1), 1(3), 28(1)ರಡಿ ಪ್ರಾಥಮಿಕ ಅಧಿಸೂಚನೆ ಮುಖಾಂತರ ಭೂಸ್ವಾಧೀನಪಡಿಸಲಾಗುತ್ತದೆ.

ನಂತರ ವಿಶೇಷ ಭೂಸ್ವಾಧೀನಾಧಿಕಾರಿಯವರು ಸಂಬಂಧಪಟ್ಟ ಜಮೀನಿನ ಭೂಮಾಲೀಕರು ಮತ್ತು ಹಿತಾಸಕ್ತದಾರರಿಗೆ ಕಲಂ 28(2) ರಡಿ ನೋಟೀಸುಗಳನ್ನು ಜಾರಿ ಮಾಡಿದ ನಂತರ ಭೂಸ್ವಾಧೀನ ಪ್ರಕ್ರಿಯೆಯ ಕುರಿತು ಶೇಕಡಾ ೯೦ರಷ್ಟು ಭೂಮಾಲೀಕರಿಂದ ಸಾಮಾನ್ಯವಾಗಿ ಯಾವುದೇ ಆಕ್ಷೇಪಣೆ ವ್ಯಕ್ತವಾಗುವುದಿಲ್ಲ.

ಕೆಲವು ಭೂಮಾಲೀಕರು ಹೆಚ್ಚಿನ ಭೂಪರಿಹಾರ ಕೋರಿ ಅಥವಾ ಭೂ ಸ್ವಾಧೀನ ಕೈಬಿಡುವ ಬಗ್ಗೆ ಆಕ್ಷೇಪಣೆಗಳನ್ನು ಸಲ್ಲಿಸುತ್ತಿದ್ದು, ಇಂತಹ ಪ್ರಕರಣಗಳಿಗೆ ಭೂಮಾಲೀಕರೊಂದಿಗೆ ಸಮಾಲೋಚಿಸಿ, ಕೈಗಾರಿಕಾ ಪ್ರದೇಶದ contiguity ಗೋಸ್ಕರ ಜಮೀನು ಅವಶ್ಯಕತೆ ಇದ್ದಲ್ಲಿ, ಅವುಗಳ ಭೂಸ್ವಾಧೀನ ಪ್ರಕ್ರಿಯೆಯನ್ನು ಮುಂದುವರೆಸಲು ಕಲಂ 28(3)ರ ಆದೇಶವನ್ನು ಹೊರಡಿಸಿ, ಜಂಟಿ ಅಳತೆ ಕಾರ್ಯ

ಕೈಗೊಂಡು, ಕೆ.ಐ.ಎ.ಡಿ. ಕಾಯ್ದೆ ಕಲಂ 28(4)ರಡಿ ಅಂತಿಮ ಅಧಿಸೂಚನೆ ಮುಖಾಂತರ ಜಮೀನುಗಳನ್ನು ಭೂಸ್ವಾಧೀನಪಡಿಸಿಕೊಳ್ಳಲಾಗುತ್ತಿದೆ.

ಕೆ.ಐ.ಎ.ಡಿ. ಕಾಯ್ದೆ ಕಲಂ 28(4)ರಡಿ ಅಂತಿಮ ಅಧಿಸೂಚನೆ ಹೊರಡಿಸಿದ ನಂತರ ಭೂಪರಿಹಾರ ದರ ನಿಗದಿಪಡಿಸುವ ಸಲುವಾಗಿ ಸಂಬಂಧಪಟ್ಟ ಜಿಲ್ಲೆಯ ಜಿಲ್ಲಾಧಿಕಾರಿ / ಕೆ.ಐ.ಎ.ಡಿ.ಬಿ.ಯ ವಿಶೇಷ ಜಿಲ್ಲಾಧಿಕಾರಿಯವರ ಅಧ್ಯಕ್ಷತೆಯಲ್ಲಿ ನಡೆಯುವ ಭೂದರ ನಿರ್ಧರಣಾ ಸಲಹಾ ಸಮಿತಿ ಸಭೆಯಲ್ಲಿ ಭೂಮಾಲೀಕರೊಂದಿಗೆ ಸಮಾಲೋಚಿಸಿ, ಪ್ರಸ್ತಾವಿತ ಪ್ರದೇಶದಲ್ಲಿನ ಮಾರ್ಗಸೂಚಿ ದರ ಮತ್ತು ಪ್ರಾಥಮಿಕ ಅಧಿಸೂಚನೆ ಹೊರಡಿಸಿದ ದಿನಾಂಕದಿಂದ ಹಿಂದಿನ 3 ವರ್ಷಗಳ ಮಾರಾಟದ ಅಂಕಿ-ಅಂಶಗಳನ್ನು ಪರಿಗಣಿಸಿ ಶಿಫಾರಸ್ಸು ಮಾಡುವ ದರಕ್ಕೆ ಮಂಡಳಿ ಸಭೆಯ ಅನುಮೋದನೆ ಪಡೆದು, ನಿಯಮಾನುಸಾರ ಪರಿಹಾರ ಪಾವತಿಸುವ ಪ್ರಕ್ರಿಯೆ ಜಾರಿಯಲ್ಲಿದೆ.

ಸಂಖ್ಯೆ: ಸಿಐ 105 ಐಎಪಿ (ಇ) 2022

(ಡಾ|| ಮುರುಗೇಶ್ ಆರ್. ನಿರಾಣಿ)
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು